# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 448
ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 10-07-2023
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಪ್ರೌಢ ಶಾಲೆಯ ಶಿಕ್ಷಕರುಗಳಿಗೆ ಮುಂಬಡ್ತಿ ನೀಡಿ ಉಪನ್ಯಾಸಕರಾಗಿ ಮಾಡದಿರಲು ಕಾರಣಗಳೇನು; | ರಾಜ್ಯದ ಪ್ರೌಢ ಶಾಲೆಯ ಶಿಕ್ಷಕರುಗಳಿಗೆ ಈ ಕೆಳಗಿನ ಕಾರಣಗಳಿಂದಾಗಿ ಬಡ್ತಿ ನೀಡುವಲ್ಲಿ ವಿಳಂಬವಾಗಿರುತ್ತದೆ:<br>1. 2014ರಲ್ಲಿ ಕಲ್ಯಾಣ ಕರ್ನಾಟಕ ಅಧಿಸೂಚನೆ ಹೊರಡಿಸಲಾಗಿದ್ದರಿಂದ ಉಪನ್ಯಾಸಕರ ಜೇಷ್ಠತಾ ಪಟ್ಟಿ ತಯಾರಿಸುವುದು, ನಂತರ ವ್ಯಕ್ತಿಗಳ ಸಮರ್ಪಕ ಹಂಚಿಕೆ ಸಂಬಂಧಿಸಿದ ಕಾರ್ಯ ನಿರ್ವಹಣೆಯಿಂದಾಗಿ;<br>2. ಬಿ.ಕೆ.ಪವಿತ್ರ ಪ್ರಕರಣ 1 ಮತ್ತು 2ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನನ್ವಯ ಸರ್ಕಾರದ ಆದೇಶ ದಿನಾಂಕ: 06-05-2017 ಮತ್ತು 15-05-2019ರಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕ ವೃಂದ ಸೇರಿದಂತೆ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸುವ ಕಾರ್ಯ ಹಾಗೂ ಹಿಂಬಡ್ತಿ ಮತ್ತು ಮುಂಬಡ್ತಿ ಪ್ರಕ್ರಿಯೆ ಸಂಬಂಧಿಸಿದ ಕಾರ್ಯಗಳನ್ನು ನಿರ್ವಹಿಸಿದ ಹಿನ್ನೆಲೆಯಿಂದಾಗಿ;<br>3. ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಕಚೇರಿ ಕೆಲಸಗಳಲ್ಲಿ ಉಂಟಾದ ಅಡಚಣೆಯಿಂದ;<br>4. ಸಾರ್ವಜನಿಕ ಶಿಕ್ಷಣ ಇಲಾಖೆಯ ನಾಲ್ಕು ವಿಭಾಗಗಳಲ್ಲಿನ ಸ್ನಾತಕೋತ್ತರ ಪದವಿ ಪಡೆದಿರುವ ಅರ್ಹ ಪ್ರೌಢಶಾಲಾ ಸಹ ಶಿಕ್ಷಕರ ನಾಲ್ಕು ವಿಭಾಗಗಳು ಸೇರಿದಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆರವರಿಂದ ಪಡೆದು ಪರಿಶೀಲಿಸಿ, ಕ್ರಮಕೈಗೊಳ್ಳಲಾಗುತ್ತಿದ್ದು;<br>5. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿನಾಂಕ: 10-12-2021ರಲ್ಲಿನ ಮಾರ್ಗಸೂಚಿಗಳನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ (ನೇರ ಮತ್ತು ಬಡ್ತಿ) ರಿಕ್ತ ಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಅನುಸರಿಸಲು ಕ್ರಮ ವಹಿಸಲಾಗುತ್ತಿದೆ. |
| ಆ) | ಪದವಿ ಪೂರ್ವ ಉಪನ್ಯಾಸಕರಿಗೆ 2014ರ ವೃಂದ ಮತ್ತು ನೇಮಕಾತಿ ನಿಯಮದಂತೆ ಸೇವಾ ಹಿರಿತನ ಇರುವ | 2014ರ ವೃಂದ ಮತ್ತು ನೇಮಕಾತಿ ನಿಯಮದಂತೆ ಪ್ರೌಢಶಾಲಾ ಸಹ ಶಿಕ್ಷಕರಿಗೆ ಬಡ್ತಿ ನೀಡುವುದಕ್ಕೆ |

| | | |
|---|---|---|
| | 75% ರಷ್ಟು ಹುದ್ದೆಗಳನ್ನು ಹಾಗೂ ಉಳಿದ 25% ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮಾಡಲು ಅವಕಾಶವಿದ್ದು, ಈ ನೇಮಕಾತಿಯನ್ನು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಂಬಂಧಿಸಿದಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ನಾಲ್ಕು ವಿಭಾಗಗಳಲ್ಲಿನ ಸ್ನಾತಕೋತ್ತರ ಪದವಿ ಪಡೆದಿರುವ ಅರ್ಹ ಪ್ರೌಢಶಾಲಾ ಸಹ ಶಿಕ್ಷಕರ ನಾಲ್ಕು ವಿಭಾಗಗಳು ಸೇರಿದಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ನೀಡುವಂತೆ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆರವರಿಂದ ಪಡೆದು ತ್ವರಿತವಾಗಿ ಪರಿಶೀಲಿಸಿ, ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು. |
| ಇ) | ಬಂದಿದ್ದಲ್ಲಿ, ಪ್ರೌಢ ಶಾಲಾ ಶಿಕ್ಷಕರುಗಳಿಗೆ ಮುಂಬಡ್ತಿ ನೀಡಿ ಪದವಿ ಪೂರ್ವ ಉಪನ್ಯಾಸಕರುಗಳಿಗೆ ಮುಂಬಡ್ತಿಯನ್ನು ಸರ್ಕಾರ ಯಾವ ಕಾಲಮಿತಿಯಲ್ಲಿ ನೀಡಲಾಗುವುದು? | |

**ಸಂಖ್ಯೆ: ಇಪಿ 113 ಡಿಜಿಡಬ್ಲ್ಯೂ 2023**

(ಎಸ್. ಮಧು ಬಂಗಾರಪ್ಪ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು